ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ, ೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ (ಸಂಖ್ಯೆ. ೨) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೭ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರ ಸಚಿವರು).—(ಶ್ರೀ ರಾಮಕೃಷ್ಣ ಹೆಗಡೆ(ಮುಖ್ಯ ಮಂತ್ರಿ) ಅವರ ಪರವಾಗಿ)—ಮಾನ್ಯ ಅಧ್ಯಕ್ಷರೆ, ''೧೯೮೭ನೇ ಇಸವಿಯ ಕರ್ನಾಟಕ ಮನರಂಜನಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.''

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ, ''೧೯೮೭ನೇ ಇಸವಿಯ ಕರ್ನಾಟಕ ಮನರಂಜನಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ, ''೧೯೮೭ನೇ ಇಸವಿಯ ಕರ್ನಾಟಕ ಮನರಂಜನಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.''

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೭ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರ ಸಚಿವರು).—(ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿ)ಅವರ ಪರವಾಗಿ.—ಮಾನ್ಯ ಅಧ್ಯಕ್ಷರೆ, ''೧೯೮೭ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.''

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''೧೯೮೭ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು